I/7955/2022

ಕರ್ನಾಟಕ ಸರ್ಕಾರ
Government of karnataka

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in
Phone - 080 26980100
Fax - 080 26422377
ಡಿಎಸ್ಇಆರ್‌ಟಿ DSERT

ಸಂಖ್ಯೆ: DSERT/ETC-6/ರೇಡಿಯೋ.ಕಾ.ಕ್ರ/13/2021-22 ದಿನಾಂಕ:29.11.2022

## ಸುತ್ತೋಲೆ

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಆಕಾಶವಾಣಿ ಮೂಲಕ ಪ್ರಸಾರಿತ ಬಾನ್‌ದನಿ ರೇಡಿಯೋ ಪಾಠ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಪತ್ರ ಸಂಖ್ಯೆ: ಇಪಿ.05ಎಂಹೆಚ್‌ಟಿ 2022, ದಿನಾಂಕ: 11-01-2022

*******

ಗುಣಾತ್ಮಕ ಶಿಕ್ಷಣದ ಗುರಿ ಸಾಧನೆಯೊಂದಿಗೆ ಡಿಜಿಟಲ್ ಉಪಕ್ರಮದ ಅಳವಡಿಕೆ ಹಾಗೂ ತರಗತಿ ಬೋಧನಾ-ಕಲಿಕಾ ಪ್ರಕ್ರಿಯೆಯಲ್ಲಿ ಏಕತಾನತೆಯನ್ನು ಹೋಗಲಾಡಿಸುವ ಉದ್ದೇಶದಿಂದ 2022-23ನೇ ಶೈಕ್ಷಣಿಕ ಸಾಲಿನಲ್ಲಿ ಆಕಾಶವಾಣಿಯ ಮೂಲಕ ಬಾನ್ ದನಿ ಕಾರ್ಯಕ್ರಮದಡಿ ಶಾಲೆಗಳಲ್ಲಿ ರೇಡಿಯೋ ಪಾಠಗಳನ್ನು ಡಿಸೆಂಬರ್-2022ರ ಮಾಹೆಯಿಂದ ಪ್ರಸಾರ ಮಾಡಲಾಗುತ್ತಿದೆ.

ಬಾನ್ ದನಿ ಕಾರ್ಯಕ್ರಮವು 1 ರಿಂದ 9ನೇ ತರಗತಿಗಳಿಗೆ ನೀತಿ ಕತೆ, ಯೋಗ ಮತ್ತು ಆರೋಗ್ಯ ಶಿಕ್ಷಣ, ವೃತ್ತಿ ಶಿಕ್ಷಣ ಮತ್ತು ಶೈಕ್ಷಣಿಕ ಮಾರ್ಗದರ್ಶನ ಹಾಗೂ ಇಂಗ್ಲಿಷ್ ಕಲಿಕೆಯನ್ನೊಳಗೊಂಡ ಸಾಮಾನ್ಯ ಪಾಠಗಳು ಮತ್ತು 4 ಹಾಗೂ 5 ನೇ ತರಗತಿಗಳಿಗೆ ಕನ್ನಡ ಮತ್ತು ಗಣಿತ ವಿಷಯಗಳ ಕಲಿವಿನ ಫಲ ಆಧಾರಿತ ಪಾಠಗಳನ್ನು ಒಳಗೊಂಡಿರುತ್ತದೆ. ಈ ಕಾರ್ಯಕ್ರಮವು ಆಕಾಶವಾಣಿಯಲ್ಲಿ ಸೋಮವಾರದಿಂದ ಗುರುವಾರದವರೆಗೆ ಮಧ್ಯಾಹ್ನ 2.35 ರಿಂದ 3.00 ಗಂಟೆಯವರೆಗೆ ಪ್ರಸಾರಗೊಳ್ಳಲಿದ್ದು, ರಾಜ್ಯದ 13 ಆಕಾಶವಾಣಿ ಕೇಂದ್ರಗಳು ಹಾಗೂ 3 ವಿವಿಧ ಭಾರತಿ FM ಕೇಂದ್ರಗಳಿಂದ ಏಕಕಾಲದಲ್ಲಿ ರೇಡಿಯೋ ಅಲ್ಲದೆ, ಸಾಮಾನ್ಯ ಮೊಬೈಲ್, All India Radio Bangalore You Tube streaming ನಲ್ಲಿ ಮತ್ತು ಜಗತ್ತಿನಾದ್ಯಂತ Prasarabharathi news on air app ನಲ್ಲಿಯೂ ಕೇಳಬಹುದು. ಇದಲ್ಲದೆ All India Radio Bangalore You Tube ನ bandani play list ನಲ್ಲಿ ಪ್ರತಿದಿನದ ಪ್ರಸಾರ ನಂತರ ಕಾರ್ಯಕ್ರಮವನ್ನು ಪುನಃ ಕೇಳಿಸಲು ಹಾಗೂ ಅನಿಸಿಕೆ ಹಂಚಿಕೊಳ್ಳಲು ಅವಕಾಶವಿದೆ. https://play.google.com/store/apps/details?id=com.prasarbharti.airnews

ಶಿಕ್ಷಕರು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು, ಚಟುವಟಿಕೆಗಳ ಸಮರ್ಪಕ ನಿರ್ವಹಣೆಯೊಂದಿಗೆ ಪಾಠಗಳನ್ನು ವಿದ್ಯಾರ್ಥಿಗಳಿಗೆ ಕೇಳಿಸಿ, ಪಾಠಗಳ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳುವಂತಾಗಲು ಹಾಗೂ ಶಾಲೆಗಳಲ್ಲಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಉಪನಿರ್ದೇಶಕರು( ಅಭಿವೃದ್ಧಿ) ರವರು ಈ ಕೆಳಗಿನಂತೆ ಕ್ರಮ ವಹಿಸುವುದು.

1. ಕಾರ್ಯಕ್ರಮದ ಸಮರ್ಪಕ ಅನುಷ್ಠಾನ ಹಾಗೂ ಅನುಪಾಲನೆಗಾಗಿ ಡಯಟ್ ನ ಓರ್ವ ಹಿರಿಯ ಉಪನ್ಯಾಸಕರು/ ಉಪನ್ಯಾಸಕರನ್ನು ರೇಡಿಯೋ ಕಾರ್ಯಕ್ರಮದ ಜಿಲ್ಲಾ ನೋಡೆಲ್ ಅಧಿಕಾರಿಯಾಗಿ ನೇಮಿಸುವುದು.
2. ಈ ಸುತ್ತೋಲೆಯೊಂದಿಗೆ ಕಳುಹಿಸಲಾಗಿರುವ ಪಾಠ ಪ್ರಸಾರದ ವೇಳಾ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ಶಾಲೆಗಳಿಗೆ ತಲುಪಿಸಲು ಹಾಗೂ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರಕ್ಕಾಗಿ ಕ್ರಮವಹಿಸುವುದು.
3. ಪಾಠ ಪ್ರಸಾರದ ವೇಳಾ ಪಟ್ಟಿಯನ್ನು ಶಾಲೆ ಹಾಗೂ ತರಗತಿಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಲು ಹಾಗೂ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲು ಮುಖ್ಯ ಶಿಕ್ಷಕರಿಗೆ ಸೂಚನೆ ನೀಡುವುದು.
4. ರೇಡಿಯೋ ಪಾಠ ಪ್ರಸಾರದ ವೇಳಾಪಟ್ಟಿಯೊಂದಿಗೆ ಶಾಲಾ ವೇಳಾಪಟ್ಟಿಯನ್ನು ಹೊಂದಾಣಿಕೆ ಮಾಡಿಕೊಂಡು ಪಾಠ ಪ್ರಸಾರಕ್ಕಾಗಿ ಅಗತ್ಯವಿರುವ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಸೂಚನೆ ನೀಡುವುದು.
5. ರೇಡಿಯೋಗಳನ್ನು ಸುಸ್ಥಿತಿಯಲ್ಲಿಟ್ಟು ಅವಧಿವಾರು ಸಂಬಂಧಿಸಿದ ಮುಖ್ಯಶಿಕ್ಷಕರು/ ಶಿಕ್ಷಕರು ಪ್ರಸಾರ ಪೂರ್ವ, ಪ್ರಸಾರ ಅವಧಿ ಮತ್ತು ಪ್ರಸಾರ ನಂತರದ ಚಟುವಟಿಕೆಗಳನ್ನು ಮಾಡಲು ಕ್ರಮವಹಿಸುತ್ತಿರುವ ಕುರಿತು ಸಿ.ಆರ್.ಪಿ, ಬಿ.ಆರ್.ಪಿ. ಬಿ.ಆರ್.ಸಿಸಿ, ಡಯಟ್‌ನ ಹಿರಿಯ ಉಪನ್ಯಾಸಕರು/ ಉಪನ್ಯಾಸಕರು ಮತ್ತು ಕ್ಷೇತ್ರ ಮಟ್ಟದ ಇತರ ಉಸ್ತುವಾರಿ ಅಧಿಕಾರಿಗಳು ಪರಿವೀಕ್ಷಿಸುವಂತೆ ಸೂಚನೆ ನೀಡುವುದು.

I/7955/2022

6. ಕ್ಷೇತ್ರ ಮಟ್ಟದ ಉಸ್ತುವಾರಿ ಅಧಿಕಾರಿಗಳು ಶಾಲಾ ಭೇಟಿಗಳಲ್ಲಿ ವಿದ್ಯಾರ್ಥಿಗಳು ಪಾಠಗಳನ್ನು ಆಲಿಸುತ್ತಿರುವ ಬಗ್ಗೆ ಪರಿಶೀಲಿಸಿ, ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಪ್ರತಿಕ್ರಿಯೆಗಳನ್ನು ವರದಿಯಲ್ಲಿ ದಾಖಲಿಸುವಂತೆ ಸೂಚಿಸುವುದು.
7. ಸಿ.ಆರ್.ಸಿ ಹಾಗೂ ಬಿ.ಆರ್.ಸಿ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಕಾರ್ಯಕ್ರಮ ಅನುಷ್ಠಾನದ ಕುರಿತು ಚರ್ಚಿಸಿ, ಅನುಪಾಲನೆ ಮಾಡುವುದು.
8. ಕ್ಷೇತ್ರ ಮಟ್ಟದ ಉಸ್ತುವಾರಿ ಅಧಿಕಾರಿಗಳು ಶಾಲಾ ಭೇಟಿಯಲ್ಲಿ ಮುಖ್ಯಶಿಕ್ಷಕರು/ ಶಿಕ್ಷಕರಿಗೆ ಸಲಹೆ ಮತ್ತು ಮಾರ್ಗದರ್ಶನ ನೀಡುವುದು ಹಾಗೂ ಕಾರ್ಯಕ್ರಮದ ಬಗ್ಗೆ ಹಿಮ್ಮಾಹಿತಿಗೆ ಕ್ರಮ ವಹಿಸುವಂತೆ ಸೂಚಿಸುವುದು.
9. ಸಿ.ಆರ್.ಪಿಗಳು ತಮ್ಮ ಕ್ಲಸ್ಟರ್‌ನ ಶಾಲೆಗಳಿಂದ ಪಡೆದ ಹಿಮ್ಮಾಹಿತಿಯನ್ನು ಕ್ರೂಢಿಕರಿಸಿ, ಪ್ರತಿ ಶುಕ್ರವಾರ ಸಂಜೆ 5.00 ಗಂಟೆಯೊಳಗೆ google form ನಲ್ಲಿ ಕಡ್ಡಾಯವಾಗಿ ಭರ್ತಿಮಾಡಿ ಸಲ್ಲಿಸಲು ಹಾಗೂ ಸಲ್ಲಿಸಿದ ಮಾಹಿತಿಯನ್ನು screen shot ನಲ್ಲಿ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಕಳುಹಿಸಲು ಸೂಚಿಸುವುದು.
10. ಸಿ.ಆರ್.ಪಿಗಳು ತಮ್ಮ ಕ್ಲಸ್ಟರ್ ನ ಶಾಲೆಗಳಲ್ಲಿ ಕಾರ್ಯಕ್ರಮ ಅನುಷ್ಠಾನದ ಭಾವಚಿತ್ರಗಳನ್ನು ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಕಳುಹಿಸಲು ಸೂಚಿಸುವುದು.
11. ಜಿಲ್ಲೆಯಲ್ಲಿ ಕಾರ್ಯಕ್ರಮ ಅನುಷ್ಠಾನದ ಸಮಗ್ರ ವರದಿಯನ್ನು ಡಿ.ಎಸ್. ಇ. ಆರ್. ಟಿ ಗೆ ಕಳುಹಿಸಲು ಕ್ರಮವಹಿಸುವುದು.
12. ಬಾನ್‌ದನಿ ಕಾರ್ಯಕ್ರಮದಡಿ ಪ್ರಸಾರವಾಗುವ ಪಾಠಗಳನ್ನು ಗುಣಾತ್ಮಕ ಕಲಿಕೆಗಾಗಿ ಪರಿಣಾಮಕಾರಿಯಾಗಿ ಬಳಸುವ ಮೂಲಕ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಕ್ರಮವಹಿಸುವುದು.

ಸೂಚನೆ: ಪ್ರತಿ ಶುಕ್ರವಾರ ಬೆಳಿಗ್ಗೆ 7.15ಕ್ಕೆ ಇಲಾಖಾ ಅಧಿಕಾರಿಗಳು ವಿವಿಧ ಯೋಜನೆ ಬಗ್ಗೆ ಮಾಹಿತಿ ನೀಡಲಿದ್ದಾರೆ. ಇದನ್ನೂ ಕೇಳಿ ಅಭಿಪ್ರಾಯ/ಅನಿಸಿಕೆ ಹಂಚಿಕೊಳ್ಳಬಹುದು.

ನಿರ್ದೇಶಕರು
ಡಿ.ಎಸ್.ಇ.ಆರ್.ಟಿ
ಬೆಂಗಳೂರು

ಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಶಕರು ( ಆಡಳಿತ ) ರವರಿಗೆ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು ( ಆಡಳಿತ ) ರವರ ಮುಖಾಂತರ
4. ರಾಜ್ಯದ ಎಲ್ಲಾ ಕ್ಷೇತ್ರ ಸಮನ್ವಯಾಧಿಕಾರಿಗಳಿಗೆ ಉಪನಿರ್ದೇಶಕರು (ಅಭಿವೃದ್ಧಿ) ರವರ ಮುಖಾಂತರ
5. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ

ಪ್ರತಿಯನ್ನು

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ಸರ್ಕಾರ ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
4. ಕಛೇರಿ ಪ್ರತಿ